ಅಧ್ಯಕ್ಷರು :— ಲಿಖಿತ ಮೂಲಕ ಉತ್ತರಿಸುವ ಪ್ರಶ್ನೆಗಳಿಗೆ ಸಂಬಂಧಪಟ್ಟ ಉತ್ತರಗಳನ್ನು ಮಂಡಿಸಲಾಯಿತು.

(2) ಅರ್ಜಿಗಳನ್ನು ಒಪ್ಪಿಸುವುದು.

ಅಧ್ಯಕ್ಷರು :— ಮಾನ್ಯ ಉಪಾಧ್ಯಕ್ಷರು ಸದನದಲ್ಲಿ ಇಲ್ಲದಿರುವ ಕಾರಣ ಅವರ ಹೆಸರಿನ ಮುಂದಿರುವ ಈ ಕೆಳಕಂಡ ಅರ್ಜಿಗಳನ್ನು ಸಭೆಯ ಮುಂದೆ ಮಂಡಿಸುತ್ತೇನೆ.

1. ಬೆಂಗಳೂರಿನ ಜಯನಗರ, ಮಾರೇನಹಳ್ಳಿ, ಟ್ಯಾಂಕ್‌ಬೆಡ್‌ನಲ್ಲಿ ಅಕ್ರಮವಾಗಿ ಕಟ್ಟಿರುವ ಮನೆಗಳನ್ನು ಸ್ಥಳಾಂತರಿಸುವ ಬಗ್ಗೆ.

2. ಮಾನವಿ ತಾಲ್ಲೂಕು ಕಲ್ಲೂರಿನ ಬೆಟ್ಟದ ಮಾರುತಿ ದೇವಸ್ಥಾನಕ್ಕೆ ಸರ್ಕಾರದಿಂದ ಮಂಜೂರಾಗಿರುವ ಹಣ ದುರುಪಯೋಗಪಡಿಸಿಕೊಂಡಿರುವ ಬಗ್ಗೆ.

3. ತುಮಕೂರು ಜಿಲ್ಲೆಯ ಬಳಗೆರೆ ಗ್ರಾಮದ ಪ್ರಾಥಮಿಕ ಆರೋಗ್ಯ ಕೇಂದ್ರದಲ್ಲಿ ಸೇವೆ ಸಲ್ಲಿಸಿರುತ್ತಿರುವ ಸಿಬ್ಬಂದಿಯವರು ಸರಿಯಾಗಿ ಕಾರ್ಯನಿರ್ವಹಿಸದಿರುವ ಬಗ್ಗೆ.

4. ತುಮಕೂರು ಜಿಲ್ಲೆಯ ಯಡಿಯೂರಿನ ಶ್ರೀ ಮಹರ್ಷಿ ವಾಲ್ಮೀಕಿ ನಾಯಕ ಕ್ಷೇಮಾಭಿವೃದ್ಧಿ ಸಂಘ (ರಿ)ಕ್ಕೆ ನಿವೇಶನ ಮಂಜೂರು ಮಾಡಿಕೊಡುವ ಬಗ್ಗೆ.

5. ಅರಸೀಕೆರೆ ತಾಲ್ಲೂಕು ಜಾವಗಲ್ಲ ಹೋಬಳಿ ಕೋಳಗುಂದ ಗ್ರಾಮದ ಶ್ರೀ ಕರಿಸಿದ್ದ ಅವರಿಗೆ ಸರ್ಕಾರಿ ಜಮೀನನ್ನು ಮಂಜೂರು ಮಾಡುವ ಬಗ್ಗೆ.

6. ಕಿಂಗೇರಿ ಹೋಬಳಿ ಶೀಗೆಹಳ್ಳಿ ಗ್ರಾಮದ ಸರ್ವೆ ನಂಬರ್ 3ರಲ್ಲಿ ಶ್ರೀ ವೆಂಕಟಪ್ಪ ಹಾಗೂ ಇತರರಿಗೆ ಜಮೀನು ಮಂಜೂರು ಮಾಡಿಕೊಡುವ ಬಗ್ಗೆ.

ಅರ್ಜಿಗಳನ್ನೊಪ್ಪಿಸಲಾಯಿತು.

(3) ವರದಿಗಳನ್ನೊಪ್ಪಿಸುವುದು.

ಶ್ರೀ ಎಸ್.ಆರ್. ಲಕ್ಷ್ಮಯ್ಯ (ಶ್ರೀ ಚಂದ್ರಶೇಖರ್ ಸದಾಶಿವ್ ನಾಯಕ್, ಅಧ್ಯಕ್ಷರು ಹಿಂದುಳಿದ ವರ್ಗಗಳ ಮತ್ತು ಅಲ್ಪಸಂಖ್ಯಾತರ ಕಲ್ಯಾಣ ಸಮಿತಿ, ಇವರ ಪರವಾಗಿ) :— ಮಾನ್ಯ ಅಧ್ಯಕ್ಷರೆ, ನಾನು ಹಿಂದುಳಿದ ವರ್ಗಗಳ ಮತ್ತು ಅಲ್ಪಸಂಖ್ಯಾತರ ಕಲ್ಯಾಣ ಸಮಿತಿಯ 21, 22 ಮತ್ತು 23ನೇ ವರದಿಯನ್ನು ಸಭೆಗೆ ಒಪ್ಪಿಸುತ್ತಿದ್ದೇನೆ.

ಅಧ್ಯಕ್ಷರು :— ವರದಿಯನ್ನು ಒಪ್ಪಿಸಲಾಯಿತು.